**ಪಿ. ಡಬ್ಲ್ಯೂಃ 1**

(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು , ತಾಃ 20/07/2024)

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಪಿ ಜಿ ಎನ್ ವಕೀಲರಿಂದ,**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ .

ದಾವಾ ಆಸ್ತಿಗೆ ಸಂಬಂಧಿಸಿದಂತೆ 7 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-1 ರಿಂದ 7 ಎಂದು, ಭಟ್ಕಳ ತಾಲೂಕು ಭೂನ್ಯಾಯ ಮಂಡಳಿಯಲ್ಲಿ ಎಲ್ ಆರ್ ಎಂ ನಂಬರ 11/298+541 ರಲ್ಲಿ ಆದ ಆದೇಶದ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಸದ್ರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸಲ್ಲಿಸಲಾದ ಫಾರ್ಮ ನಂಬರ 10 ರ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು,ಮಾವಳ್ಳಿ 2 ಗ್ರಾಮದ ಮ್ಯುಟೇಶನ್ ಎಂಟ್ರಿ ಸಂಖ್ಯೆ ಎ4109 ರ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಮಾವಳ್ಳಿ 2 ಗ್ರಾಮದ ಮ್ಯುಟೇಶನ್ ಎಂಟ್ರಿ ಸಂಖ್ಯೆ 4560 ರ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, ಮಾವಳ್ಳಿ 2 ಗ್ರಾಮದ ಮ್ಯುಟೇಶನ್ ಎಂಟ್ರಿ ಸಂಖ್ಯೆ ಎ3411 ರ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು, ಭಟ್ಕಳದ ಉಪ ನೋಂದಣಾಧಿಕಾರಿಯವರಿಗೆ ನಾನು ನೀಡಿದ ಅರ್ಜಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು, ಮೂರು ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-14 ರಿಂದ 16 ಎಂದು, ಭೂಮಾಪಕರು ನೀಡಿದ ದಿನಾಂಕ 26.08.2022 ರ ನೋಟಿಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-17 ಎಂದು, ದಾವಾ ಆಸ್ತಿಗೆ ಸಂಬಂಧಿಸಿದಂತೆ ನಾಲ್ಕು ಫೋಟೋಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಸಾಕ್ಷ್ಯ ಅಧಿನಿಯಮದ ಕಲಂ 65 ಬಿ ಯ ಅನ್ವಯಕ್ಕೊಳಪಟ್ಟು ಅವುಗಳನ್ನು ನಿಪಿ-18 ರಿಂದ ನಿಪಿ-21 ಎಂದು, ಸದ್ರಿ ಫೋಟೋಗಳಿಗೆ ಸಂಬಂಧಿಸಿದಂತೆ ಫೋಟೊ ಸ್ಟುಡಿಯೋದವರು ನೀಡಿದ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-21ಎ ಎಂದು, ಸದ್ರಿ ಫೋಟೋಗಳಿಗೆ ಸಂಬಂಧಿಸಿದ ಸಿಡಿ ಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-21 ಬಿ ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.**

(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ. ಹೇ.ಕೇ. ಸರಿ ಇದೆ**

**ಸಹಿ ಇದೆ.**

**ಹೆಚ್ಚುವರಿ ಸಿವಿಲ್ ಜಡ್ಜ, ಭಟ್ಕಳ**